## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಲಂಕಾ ಹಾಗೂ ಬಾಂಗ್ಲಾ ನಿರಾಶ್ರಿತರಿಗೆ ಜಾತಿ ಪ್ರಮಾಣ ಪತ್ರ ನೀಡುವ ಬಗ್ಗೆ ಪರಿಶೀಲಿಸಿ ವರದಿ ನೀಡಲು ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಭಾರತ ಸರ್ಕಾರ ಇವರ ಪತ್ರ ದಿ: 08.04.1991.

* * * *

ಪ್ರಸ್ತಾವನೆ:

ಶ್ರೀಲಂಕಾ ಮತ್ತು ಬಾಂಗ್ಲಾ ದೇಶಗಳಿಂದ ವಲಸೆಯಿಂದ ಹಿಂತಿರುಗಿ ಬಂದು ಕರ್ನಾಟಕದಲ್ಲಿ ನೆಲೆಸಿರುವವರು ಜಾತಿ ಪ್ರಮಾಣ ಪತ್ರ ನೀಡುವಂತೆ ಆಗ್ಗಿಂದಾಗ್ಗೆ ಸರ್ಕಾರಕ್ಕೆ ಕೋರಿಕೆ ಸಲ್ಲಿಸಿರುತ್ತಾರೆ. ಶ್ರೀಲಂಕಾ ಮತ್ತು ಬಾಂಗ್ಲಾ ದೇಶಗಳಿಂದ ವಲಸೆಯಿಂದ ಹಿಂತಿರುಗಿ ಬಂದು ದಕ್ಷಿಣ ಕನ್ನಡ ಮತ್ತು ರಾಯಚೂರು ಜಿಲ್ಲೆಗಳಲ್ಲಿ ನೆಲೆಸಿರುವ ಕುಟುಂಬಗಳಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗದ ಜಾತಿ ಪ್ರಮಾಣ ಪತ್ರ ನೀಡುವಂತೆ ಮನವಿ ಮಾಡುತ್ತಿದ್ದಾರೆ.

ಶ್ರೀಲಂಕಾ ಮತ್ತು ಬಾಂಗ್ಲಾ ದೇಶಗಳಿಂದ ವಲಸೆಯಿಂದ ಹಿಂತಿರುಗಿ ಬಂದ ಕುಟುಂಬಗಳು ಕರ್ನಾಟಕದಲ್ಲಿ ನೆಲೆಸಿದ್ದು, (ಹೊರ ದೇಶಗಳಿಂದ) ಶ್ರೀಲಂಕಾ ಮತ್ತು ಬಾಂಗ್ಲಾ ದೇಶಗಳಲ್ಲಿ ಈ ಜಾತಿಗಳ ಗುರುತಿಸುವಿಕೆ ಇರುವುದಿಲ್ಲ. ಆದ್ದರಿಂದ ಈ ಎರಡೂ ದೇಶಗಳಿಂದ ವಲಸೆಯಿಂದ ಹಿಂತಿರುಗಿ ಬಂದವರು ಅವರ ಪೂರ್ವಿಕರು ಹೊಂದಿದ ಜಾತಿ ಪ್ರಮಾಣ ಪತ್ರ ಒದಗಿಸಲು ಸಾಧ್ಯವಾಗುತ್ತಿಲ್ಲ.

ಈ ಬಗ್ಗೆ ನಿರ್ದೇಶಕರು, ಭಾರತ ಸರ್ಕಾರ, ನವದೆಹಲಿ ಇವರು ಮೇಲೆ ಓದಲಾದ ದಿನಾಂಕ: 08.04.1991ರ ಪತ್ರದಲ್ಲಿ ಭಾರತದ ಪೌರತ್ವದ ಬಗ್ಗೆ ಹಲವು ನಿರ್ದೇಶನಗಳನ್ನು ನೀಡಿರುತ್ತಾರೆ.

ಭಾರತ ಸರ್ಕಾರದ ಪೌರತ್ವ ಪಡೆಯದೇ ಇರುವ ವಲಸೆ ಬಂದ ನಿರಾಶ್ರಿತರಿಗೆ ಇಂತಹ ಜಾತಿ ಪ್ರಮಾಣ ಪತ್ರ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ವಿಷಯ ಕುರಿತು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಸರ್ಕಾರಕ್ಕೆ ವರದಿ ನೀಡಲು ಒಂದು ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ ಸಮಿತಿಯನ್ನು ರಚಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 157 ಎಸ್‌ಎಡಿ 2009**
**ಬೆಂಗಳೂರು ದಿನಾಂಕ: 26.03.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಲಂಕಾ ಹಾಗೂ ಬಾಂಗ್ಲಾ ದೇಶಗಳಿಂದ ವಲಸೆ ಬಂದು ದಕ್ಷಿಣ ಕನ್ನಡ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ನೆಲೆಸಿರುವ ನಿರಾಶ್ರಿತರಿಗೆ ಜಾತಿ ಪ್ರಮಾಣ ಪತ್ರ ನೀಡುವ ಕುರಿತು ಈ ಜನರ ಕೋರಿಕೆಗಳನ್ನು ಪರಿಶೀಲಿಸಿ ಸರ್ಕಾರವು ಅಳವಡಿಸಿಕೊಳ್ಳಬೇಕಾದ ಅಂಶಗಳ ಕುರಿತು ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ನೀಡಲು ಸರ್ಕಾರದ ಅಪರ ಮುಖ್ಯ

ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು – ಅಧ್ಯಕ್ಷರು
2. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು. – ಸದಸ್ಯರು
3. ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ವಿಭಾಗ, ಗುಲ್ಬರ್ಗಾ. – ಸದಸ್ಯರು
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. – ಸದಸ್ಯರು

ಮೇಲ್ಕಂಡ ಸಮಿತಿಯು ಶ್ರೀಲಂಕಾ ಮತ್ತು ಬಾಂಗ್ಲಾ ದೇಶಗಳಿಂದ ವಲಸೆಯಿಂದ ಹಿಂತಿರುಗಿ ಬಂದು ದಕ್ಷಿಣ ಕನ್ನಡ ಮತ್ತು ರಾಯಚೂರು ಜಿಲ್ಲೆಗಳಲ್ಲಿ ನೆಲೆಸಿರುವ ಸ್ಥಳಗಳಿಗೆ ಭೇಟಿ ನೀಡುವುದನ್ನೂ ಒಳಗೊಂಡಂತೆ ವಿವರವಾದ ವಿಚಾರಣೆ ಕೈಗೊಂಡು ಸೂಕ್ತ ಶಿಫಾರಸ್ಸುಗಳೊಂದಿಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
3. ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ವಿಭಾಗ, ಗುಲ್ಬರ್ಗಾ.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು..
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿಗಳು-1 & 2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.